# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಹೆಚ್. ರಸ್ತೆ, ತುಮಕೂರು-572103

**ಸಂಖ್ಯೆ :ತುವಿ: ಕಾ.ಅ.ಪ:ಸಂ:2024-25/**2634 **ದಿನಾಂಕ: 28.10.2024**

## ಅಧಿಸೂಚನೆ

**ವಿಷಯ: 2024-25ನೇ ಶೈಕ್ಷಣಿಕ ಸಾಲಿಗೆ ಶ್ರೀ ಸಿದ್ಧಾರ್ಥ ಇನ್ಸ್‌ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್ ಸ್ಟಡೀಸ್, ತುಮಕೂರು, ಈ ಕಾಲೇಜಿಗೆ ಸಂಯೋಜನೆ ನವೀಕರಿಸುವ ಕುರಿತು.**

ಉಲ್ಲೇಖ: 1) ದಿನಾಂಕ:15.06.2024 ರಂದು ನಡೆದ ವಿದ್ಯಾವಿಷಯಕ ಪರಿಷತ್ ಸಭೆಯ ನಿರ್ಣಯ
2) ದಿನಾಂಕ:15.06.2024 ರಂದು ನಡೆದ ಸಿಂಡಿಕೇಟ್ ಸಭೆಯ ನಿರ್ಣಯ
3) ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ: 24.10.2024

* * * *

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ – 2000ರ 59ನೇ ಪ್ರಕರಣದ (17)ನೇ ಉಪಬಂಧದಲ್ಲಿ ಪ್ರದತ್ತವಾದ ಅಧಿಕಾರದನ್ವಯ ತುಮಕೂರು ವಿಶ್ವವಿದ್ಯಾನಿಲಯವು 2024-25ನೇ ಶೈಕ್ಷಣಿಕ ಸಾಲಿಗೆ **ಶ್ರೀ ಸಿದ್ಧಾರ್ಥ ಇನ್ಸ್‌ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್ ಸ್ಟಡೀಸ್, ತುಮಕೂರು** ಇಲ್ಲಿ ನಡೆಸುತ್ತಿರುವ ಕೋರ್ಸಿಗೆ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸಂಯೋಜನೆಯನ್ನು ನವೀಕರಿಸಿ ಮುಂದುವರೆಸಲು ಮಂಜೂರಾತಿ ನೀಡಲಾಗಿದೆ.

| **ಕೋರ್ಸು** | **ವಿಷಯ ಸಮೂಹ / ಐಚ್ಛಿಕ ವಿಷಯಗಳು** | **ವಿದ್ಯಾರ್ಥಿ ಪ್ರಮಾಣ** |
|---|---|---|
| ಎಂ.ಬಿ.ಎ. | ವಿಶ್ವವಿದ್ಯಾನಿಲಯದ ವಿನಿಯಮದಂತೆ | 120 (ಒಂದುನೂರ ಇಪ್ಪತ್ತು) |
| As per LIC Secured Weighted Score of the College is – 69.36 % | | |

**ಷರತ್ತುಗಳು:**

1. ಕಾಲೇಜಿನ ಪ್ರಾಂಶುಪಾಲರ ಹಾಗೂ ಸ್ನಾತಕೋತ್ತರ ಕೋರ್ಸುಗಳ ಅಧ್ಯಾಪಕರುಗಳ ನೇಮಕಾತಿಯಲ್ಲಿ ವಿಶ್ವವಿದ್ಯಾನಿಲಯದ ಧನ ಸಹಾಯ ಆಯೋಗದ (ಯು.ಜಿ.ಸಿ.) ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವುದು.
2. ವಿಶ್ವವಿದ್ಯಾನಿಲಯದ ಪ್ರತಿನಿಧಿಯನ್ನೊಳಗೊಂಡಂತೆ ಗೌರ್ನಿಂಗ್ ಕೌನ್ಸಿಲ್ ಸಭೆಯನ್ನು ಕಡ್ಡಾಯವಾಗಿ ನಡೆಸುವುದು ಹಾಗೂ ಸಭೆಯ ನಡಾವಳಿಯನ್ನು ವಿಶ್ವವಿದ್ಯಾನಿಲಯಕ್ಕೆ ತಪ್ಪದೇ ಸಲ್ಲಿಸುವುದು.
3. ಸ್ಥಳೀಯ ವಿಚಾರಣಾ ಸಮಿತಿಯು ವಿಧಿಸಿರುವ ಪ್ರತಿಯೊಂದು ಷರತ್ತುಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

ಪು.ತಿ.ನೋ.

4. ವಿಶ್ವವಿದ್ಯಾನಿಲಯದ ಸಂಯೋಜನಾ ಅಧಿಸೂಚನೆಗನುಗುಣವಾಗಿ ಕೋರ್ಸ್‌ಗಳಿಗೆ ನಿಗದಿಪಡಿಸಿರುವ ವಿದ್ಯಾರ್ಥಿ ಪ್ರಮಾಣವನ್ನು ಮೀರದಂತೆ ಹಾಗೂ ಕೋರ್ಸ್‌ಗಳಿಗೆ ನಿಗದಿಪಡಿಸಿರುವ ಅರ್ಹತಾ ನಿಯಮಾವಳಿಗಳನ್ನು ಉಲ್ಲಂಘಿಸದಂತೆ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಕೊಳ್ಳತಕ್ಕದ್ದು. ಹೆಚ್ಚುವರಿ ಪ್ರಮಾಣವನ್ನು ಯಾವುದೇ ಕಾರಣಕ್ಕೂ ಮಾಡಬಾರದು.
5. ಯಾವುದೇ ಕೋರ್ಸಿಗೆ ವಿಶ್ವವಿದ್ಯಾನಿಲಯದ ಪೂರ್ವಾನುಮತಿಯಿಲ್ಲದೆ ಹೆಚ್ಚುವರಿ ವಿಭಾಗಗಳನ್ನು ತೆರೆಯಬಾರದು.
6. ಸದರಿ ಪದವಿ ಕೋರ್ಸ್‌ಗಳಿಗೆ ವಿದ್ಯಾರ್ಥಿಗಳ ಪ್ರವೇಶ ಕಲ್ಪಿಸುವಾಗ ಸರ್ಕಾರದಿಂದ ಆಗಿಂದಾಗ್ಗೆ ಹೊರಡಿಸುವ ಮೀಸಲಾತಿ ಆದೇಶಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
7. ಕಾಲೇಜಿನ ಪ್ರಾಂಶುಪಾಲರು/ ಆಡಳಿತ ಮಂಡಳಿಯು ವಿದ್ಯಾರ್ಥಿಗಳು, ಬೋಧಕರು ಹಾಗೂ ಬೋಧಕೇತರ ನೌಕರರ ಬಗ್ಗೆ ವಿಶ್ವವಿದ್ಯಾನಿಲಯವು ಕಾಲಕಾಲಕ್ಕೆ ಹೊರಡಿಸುವ ನಿಯಮಾವಳಿ / ಪರಿನಿಯಮಾವಳಿ ಮತ್ತು ಆದೇಶಗಳನ್ನು ಪಾಲಿಸತಕ್ಕದ್ದು.
8. ಪ್ರವೇಶ ಮತ್ತು ಇತರೇ ಶುಲ್ಕಗಳನ್ನು ವಿಶ್ವವಿದ್ಯಾನಿಲಯವು ನಿಗದಿಪಡಿಸಿದ ದರದಲ್ಲಿ ವಿದ್ಯಾರ್ಥಿಗಳಿಂದ ಪಡೆದುಕೊಳ್ಳತಕ್ಕದ್ದು.
9. ವಿದ್ಯಾರ್ಥಿಗಳನ್ನು ಶೈಕ್ಷಣಿಕವಾಗಿ ಅಭಿವೃದ್ಧಿಗೊಳಿಸುವ ಸಲುವಾಗಿ ಕಾಲೇಜಿನಲ್ಲಿ ಶೈಕ್ಷಣಿಕ ಕ್ರಮವನ್ನು ಉತ್ತಮ ಪಡಿಸತಕ್ಕದ್ದು.
10. ವಿದ್ಯಾರ್ಥಿಗಳನ್ನು ಹಾಗೂ ಸೇವೆಯಲ್ಲಿರುವ ಬೋಧಕರುಗಳನ್ನು ಪ್ರಾಂಶುಪಾಲರು / ಆಡಳಿತ ಮಂಡಳಿಯವರು ಸಹಾನುಭೂತಿಯಿಂದ ನೋಡಿಕೊಳ್ಳತಕ್ಕದ್ದು.
11. ಯಾವುದೇ ರೀತಿಯಾದ ಕ್ಯಾಪಿಟೇಷನ್ ಶುಲ್ಕವನ್ನು ಕಾಲೇಜು ವಸೂಲಿ ಮಾಡತಕ್ಕದ್ದಲ್ಲ.

**ಕುಲಸಚಿವರು**

ಕುಲಸಚಿವರು
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ,

**ಪ್ರಾಂಶುಪಾಲರು, ಶ್ರೀ ಸಿದ್ಧಾರ್ಥ ಇನ್‌ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್ ಸ್ಟಡೀಸ್, ಎಸ್.ಎಸ್.ಐ.ಟಿ. ಕ್ಯಾಂಪಸ್, ಪಿ.ಜಿ. ಬ್ಲಾಕ್, ಮರಳೂರು, ತುಮಕೂರು-572105**

**ಪ್ರತಿಗಳು:**

1) ಸರ್ಕಾರದ ಪ್ರಧಾನ ಕಾರ್ಯದರ್ಶಿಯವರು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಡಾ. ಬಿ.ಆರ್. ಅಂಬೇಡ್ಕರ್ ವೀಧಿ, ಬೆಂಗಳೂರು-560001.
2) ಆಯುಕ್ತರು / ನಿರ್ದೇಶಕರು, ಕಾಲೇಜು ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು-560001.
3) ಕುಲಸಚಿವರು (ಮೌಲ್ಯಮಾಪನ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4) ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಯವರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5) ಉಪಕುಲಸಚಿವರು (ಶೈಕ್ಷಣಿಕ ವಿಭಾಗ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
6) ಕಛೇರಿ ಪ್ರತಿ.